ಈ) ರೂ. 7.10 ಲಕ್ಷ.

ಉ) ರೂ.3,01,112.00 ಗಳಷ್ಟು ಉಪಯೋಗವಾಗಿದೆ. ಎಲ್ಲಾ ವಿದ್ಯಾರ್ಥಿಗಳಿಗೆ ವಿತರಣೆ ಮಾಡಿಯೂ ಉಳಿತಾಯವಾಗಿದೆ. ಇದು ಜಿಲ್ಲಾ ವಲಯ ಕಾರ್ಯಕ್ರಮವಾಗಿದ್ದು, ಕೆಲವು ಜಿಲ್ಲೆಗಳಲ್ಲಿ ಸಾಕಷ್ಟು ಅರ್ಜಿಗಳು ಬಾರದಿರುವ ಕಾರಣ ಹಣ ಉಳಿತಾಯವಾಗಿದೆ. ಬೆಂಗಳೂರು ನಗರ ಜಿಲ್ಲೆಯಲ್ಲಿ ಹೆಚ್ಚು ಅರ್ಜಿಗಳು ಬಂದಿದ್ದರೂ ಆಯವ್ಯಯದ ಕೊರತೆಯ ಕಾರಣ ಎಲ್ಲಾ ಅಭ್ಯರ್ಥಿಗಳಿಗೆ ಹಣ ವಿತರಿಸಲಾಗಿಲ್ಲ.

ಊ) 2007–08ನೇ ಸಾಲಿಗೆ ಬೆಂಗಳೂರು ನಗರ ಜಿಲ್ಲೆಗೆ ರೂ.ಆರು ಲಕ್ಷಗಳನ್ನು ಈ ಉದ್ದೇಶಕ್ಕಾಗಿ ಒದಗಿಸಲಾಗಿದೆ.

531 (988) ಶ್ರೀ ಐವಾನ್ ನಿಗ್ಲಿ (ನಾಮಾಂಕಿತ) :– ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿವೇಶನ ಕೋರಿ ಮಾನ್ಯ ವಿಧಾನ ಸಭೆ ಮತ್ತು ಮಾನ್ಯ ವಿಧಾನ ಪರಿಷತ್ ಸದಸ್ಯರುಗಳಿಂದ ಸ್ವೀಕರಿಸಿರುವ ಒಟ್ಟು ಅರ್ಜಿಗಳೆಷ್ಟು; (ಪ್ರದೇಶವಾರು ವಿವರಣೆ ನೀಡುವ ಬಗ್ಗೆ)

2) ನಿವೇಶನ ಕೋರಿ ಬಂದಿರುವ ಅರ್ಜಿಗಳಲ್ಲಿ ಮಾನ್ಯತೆ ಮಾಡಿದ ಮತ್ತು ತಿರಸ್ಕೃತವಾದ ಅರ್ಜಿಗಳೆಷ್ಟು; ಅರ್ಜಿಗಳನ್ನು ತಿರಸ್ಕರಿಸಲು ಕಾರಣಗಳೇನು?

ಶ್ರೀ ಡಿ.ಟಿ. ಜಯಕುಮಾರ್ (ವಸತಿ ಸಚಿವರು) :

1) ಕರ್ನಾಟಕ ಗೃಹ ಮಂಡಳಿಯಲ್ಲಿ ನಿವೇಶನ ಕೋರಿ ಮಾನ್ಯ ವಿಧಾನ ಸಭಾ ಸದಸ್ಯರು/ಮಾನ್ಯ ವಿಧಾನ ಪರಿಷತ್ತು ಸದಸ್ಯರುಗಳಿಂದ ಸಾಧಾರಣ 47 ಅರ್ಜಿಗಳನ್ನು ಸ್ವೀಕರಿಸಲಾಗಿದೆ ಎಂದು ಲೆಕ್ಕಾಚಾರ ಇರುತ್ತದೆ.

2) ನಿವೇಶನ ಕೋರಿ ಬಂದಿರುವ ಅರ್ಜಿಗಳಲ್ಲಿ 8 ಅರ್ಜಿದಾರರಿಗೆ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ. ಉಳಿದ 39 ಅರ್ಜಿದಾರರಿಗೆ ಹಂಚಿಕೆಯಾಗಿರುವುದಿಲ್ಲ; ಯಾವುದೇ ಅರ್ಜಿಗಳನ್ನು ತಿರಸ್ಕರಿಸಿರುವುದಿಲ್ಲ.

532 (19) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ (ಬ್ರಹ್ಮಾವರ) :– ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?